OS No. 10/2020

PW-1 ಸರಳ

Date: 10.06.2026

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು 1 ಎ ಪ್ರತಿವಾದಿ ಪರ ಶ್ರೀ ಡಿ ಬಿ ಬಿ ಹೆಚ್ ವಕೀಲರಿಂದಃ**

ನಾನು ಪಿಯುಸಿ ವಿದ್ಯಾಭ್ಯಾಸ ಮಾಡಿರುತ್ತೇನೆ. ನನಗ ಕನ್ನಡ ಭಾಷೆ ಓದಲು ಬರೆಯಲು ಬರುತ್ತದೆ. ನನಗೆ ಆಂಗ್ಲ ಭಾಷೆ ಓದಲು ಬರೆಯಲು ಬರುತ್ತದೆ. ನಾನು ಗೃಹಿಣಿ. ನಾನು ಬೇರೆ ಯಾವುದೇ ಕೆಲಸವನ್ನು ಮಾಡುತ್ತಿಲ್ಲ. ನಾನು ಚಳ್ಳಕೆರೆಯ ಕರ್ನಾಟಕ ಗ್ರಾಮೀಣ ಬ್ಯಾಂಕ್ ನಲ್ಲಿ ಖಾತೆಯನ್ನು ಹೊಂದಿರುತ್ತೇನೆ. ಸದರಿ ಬ್ಯಾಂಕಿನಿಂದ ನಾನು ನನ್ನ ಹೆಸರಿನಲ್ಲಿ ಚೆಕ್ ಗಳನ್ನು ಪಡೆದುಕೊಂಡಿರುತ್ತೇನೆ. ನಾನು ಚೆಕ್ ಮೂಲಕ ಯಾವುದೇ ವ್ಯವಹಾರವನ್ನು ಖುದ್ದಾಗಿ ಮಾಡಿರುವುದಿಲ್ಲ. ಸಾಕ್ಷಿ ಮುಂದುವರೆದು ನನ್ನ ಗಂಡ ಮಾಡಿರುತ್ತಾರೆ ಎಂದು ನುಡಿದಿರುತ್ತಾರೆ. ನನ್ನ ಖಾತೆ ಮೂಲಕ ನನ್ನ ಗಂಡ ಈವರೆಗೆ ಎಷ್ಟು ವ್ಯವಹಾರಗಳನ್ನು ಮಾಡಿದ್ದಾರೆ ಎಂದು ನನಗೆ ಹೇಳಲಾಗುವುದಿಲ್ಲ. ನನ್ನ ಬ್ಯಾಂಕ್ ಖಾತೆಯ ವಿವರಣೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇಲ್ಲ. 1 ನೇ ಪ್ರತಿವಾದಿ ನನ್ನ ಗಂಡನಿಗೆ ಪರಿಚಿತರಾದ ಕಾರಣ ನನಗೂ ಕೂಡ ಅವರು ಪರಿಚಯವಾಗಿದ್ದರು. 1 ನೇ ಪ್ರತಿವಾದಿ ಮಾತ್ರ ಚಳ್ಳಕೆರೆಯ ಹಳೇ ಟೌನ್ ನಲ್ಲಿ ವಾಸವಾಗಿದ್ದರು. ನಾನು 1 ನೇ ಪ್ರತಿವಾದಿಯ ಹೆಂಡತಿ ಮತ್ತು ಮಕ್ಕಳನ್ನು ನೋಡಿರಲಿಲ್ಲ.

**ಮುಂದುವರೆದ ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ